**Akashvani : Bangalore**
**Regional Bulletin In Kannada**
**02.02.2026 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**02.02.2026 / 14.30 hrs**

**<><*<><>*><>**

ಮುಖ್ಯಾಂಶಗಳು

**೧. ಕರ್ನಾಟಕ - ತಮಿಳುನಾಡು ದಕ್ಷಿಣ ಪಿನಾಕಿನಿ ಜಲವಿವಾದ; ನ್ಯಾಯಮಂಡಳಿ ಸ್ಥಾಪನೆಗೆ ಸುಪ್ರೀಂಕೋರ್ಟ್ ಆದೇಶ**

**೨. ದ್ವೇಷ ಭಾಷಣ ವಿಧೇಯಕ; ೨೮ ಕಾರಣ ಉಲ್ಲೇಖಿಸಿ ರಾಷ್ಟ್ರಪತಿಗಳ ಪರಿಗಣನೆಗೆ ರವಾನೆ- ಗೃಹ ಸಚಿವ ಡಾ.ಜಿ.ಪರಮೇಶ್ವರ್**

**೩. ರಾಜ್ಯದ ಉಪ ವಿಭಾಗಾಧಿಕಾರಿಗಳೊಂದಿಗೆ ಸಚಿವ ಕೃಷ್ಣಬೈರೇಗೌಡ ಪ್ರಗತಿ ಪರಿಶೀಲನಾ ಸಭೆ; ಅಧಿಕಾರಿಗಳ ಸೇವೆಗೆ ಪ್ರಶಂಸೆ**

**೪. ವಿಧಾನಸಭೆ, ಮೇಲ್ಮನೆಯಲ್ಲಿ ಸರ್ಕಾರದ ಕಾರ್ಯವೈಖರಿಯ ಬಗ್ಗೆ ಪ್ರತಿಪಕ್ಷಗಳಿಂದ ಚರ್ಚೆ; ಸಮಸ್ಯೆ ಬಗೆಹರಿಸುವಂತೆ ಸರ್ಕಾರಕ್ಕೆ ಮನವಿ**

**೫. ಬೆಂಗಳೂರಿನ ನಮ್ಮ ಮೆಟ್ರೋದಲ್ಲಿ ಪ್ರಯಾಣಿಕರಿಂದ ನಿಯಮ ಉಲ್ಲಂಘನೆ ಹಿನ್ನೆಲೆ; ವಿಶೇಷ ಸಿಬ್ಬಂದಿಯಿಂದ ಜಾಗೃತಿ**

**<><*<><>*><>**

ಕರ್ನಾಟಕ-ತಮಿಳುನಾಡು ನಡುವಿನ ದಕ್ಷಿಣ ಪಿನಾಕಿನಿ ನದಿ ನೀರು ಹಂಚಿಕೆ ವಿವಾದಕ್ಕೆ ಸಂಬಂಧಿಸಿದಂತೆ ಸುಪ್ರೀಂಕೋರ್ಟ್ ಮಹತ್ವದ ಆದೇಶ ನೀಡಿದೆ. ದಕ್ಷಿಣ ಪಿನಾಕಿನಿ ಜಲ ವಿವಾದ ಇತ್ಯರ್ಥಕ್ಕೆ ಒಂದು ತಿಂಗಳೊಳಗೆ ನ್ಯಾಯಾಧೀಕರಣ ರಚಿಸುವಂತೆ ಕೇಂದ್ರಕ್ಕೆ ಸೂಚಿಸಿದೆ. ಕರ್ನಾಟಕದ ಮಾತುಕತೆ ವಾದವನ್ನು ತಿರಸ್ಕರಿಸಿದ ನ್ಯಾಯಾಲಯ, ತಮಿಳುನಾಡಿನ ನ್ಯಾಯಾಧಿಕರಣ ರಚನೆ ಬೇಡಿಕೆಯನ್ನು ಪುರಸ್ಕರಿಸಿದೆ. ದಕ್ಷಿಣ ಪಿನಾಕಿನಿ ನದಿಯ ಉಪನದಿಯಾದ ಮಾರ್ಕಂಡೇಯ ನದಿಗೆ ಅಡ್ಡಲಾಗಿ ರಾಜ್ಯ ನಿರ್ಮಿಸುತ್ತಿರುವ ಚೆಕ್ ಡ್ಯಾಮ್‌ಗಳು ಮತ್ತು ಜಲಾಶಯಗಳ ನಿರ್ಮಾಣಕ್ಕೆ ತಮಿಳುನಾಡು ಆಕ್ಷೇಪ ವ್ಯಕ್ತಪಡಿಸಿತ್ತು. ಇದು ತಮಿಳುನಾಡಿನ ಉತ್ತರ ಜಿಲ್ಲೆಗಳಾದ ಕೃಷ್ಣಗಿರಿ, ಧರ್ಮಪುರಿ ಮುಂತಾದ ಕಡೆ ನೀರಿನ ಹರಿವನ್ನು

ಕುಂಠಿತಗೊಳಿಸುತ್ತದೆ ಎಂದು ವಾದಿಸಿತ್ತು. ವಾದ-ಪ್ರತಿವಾದ ಆಲಿಸಿದ ನ್ಯಾಯಾಲಯ, ನ್ಯಾಯಾಧಿಕರಣ ರಚನೆ ಮಾಡುವಂತೆ ಆದೇಶ ಪ್ರಕಟಿಸಿದೆ.

**<><*<><>*><>**

ದ್ವೇಷ ಭಾಷಣ ಮಸೂದೆಯಲ್ಲಿನ ೨೮ ಅಂಶಗಳನ್ನು ರಾಜ್ಯಪಾಲರು ಪ್ರಶ್ನಿಸಿದ್ದು, ಅದನ್ನು ರಾಷ್ಟ್ರಪತಿಗಳಿಗೆ ಕಳುಹಿಸಿಸಲಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಷ್ಟ್ರಪತಿಗಳು ಪರಿಶೀಲಿಸಿ ಹಿಂತಿರುಗಿಸಿದರೆ, ಅದನ್ನು ಬದಲಾವಣೆ ಮಾಡಿ, ಕಳುಹಿಸಲಾಗುವುದು ಎಂದು ಹೇಳಿದ್ದಾರೆ. ಈ ವಿಧೇಯಕದಿಂದ ಸಮಾಜದಲ್ಲಿ ಶಾಂತಿ ಉಂಟು ಮಾಡಲು ಸಹಕಾರಿಯಾಗಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ, ಉದ್ಯಮಿ ಸಿ.ಜೆ.ರಾಯ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಊಹಾಪೋಹಗಳು ಎದ್ದಿರುವ ಹಿನ್ನೆಲೆಯಲ್ಲಿ ಎಸ್‌ಐಟಿ ರಚನೆ ಮಾಡಲಾಗಿದೆ. ಎಸ್‌ಐಟಿ ವರದಿ ಬಂದ ಬಳಿಕ ಘಟನೆಗೆ ನಿಖರ ಕಾರಣ ತಿಳಿದುಬರಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಕಂದಾಯ ಸಚಿವ ಕೃಷ್ಣಬೈರೇಗೌಡ ವಿಕಾಸಸೌಧದಲ್ಲಿಂದು ರಾಜ್ಯದ ಎಲ್ಲಾ ಉಪ-ವಿಭಾಗಾಧಿಕಾರಿಗಳ ಜೊತೆ ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಈ ಸಂದರ್ಭದಲ್ಲಿ ಸಚಿವರು, ಬೆಂಗಳೂರು ಸುತ್ತಮುತ್ತಲ ಜಿಲ್ಲೆಗಳಲ್ಲೇ ೧೦ ಸಾವಿರಕ್ಕೂ ಅಧಿಕ ಪ್ರಕರಣಗಳು ಬಾಕಿ ಇದ್ದು, ಮಾರ್ಚ್ ಅಂತ್ಯದೊಳಗೆ ಅವಧಿ ಮೀರಿದ ಪ್ರಕರಣಗಳ ವಿಲೇವಾರಿಗೊಳಿಸಬೇಕು ಎಂದು ಸೂಚನೆ ನೀಡಿದರು. ಉಪವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಬಾಕಿ ಇದ್ದ ಪ್ರಕರಣಗಳನ್ನು ವಿಲೇವಾರಿಗೊಳಿಸಲು ಸಾಧ್ಯವಿಲ್ಲ ಎಂಬ ವಿಪಕ್ಷ ನಾಯಕರ ಆರೋಪದ ನಡುವೆಯೂ ಎಲ್ಲಾ ಅಧಿಕಾರಿಗಳ ಸಹಾಯದಿಂದ ಈ ಕಾರ್ಯವನ್ನು ಅಧಿಕಾರಿಗಳು ಸಾಧ್ಯವಾಗಿಸಿದ್ದಾರೆ ಎಂದು ಶ್ಲಾಘಿಸಿದರು. ಕಳೆದ ಎರಡೂವರೆ ವರ್ಷದಲ್ಲಿ ೨ ಲಕ್ಷದ ೩೦ ಸಾವಿರ ಕುಟುಂಬಗಳಿಗೆ ಕಂದಾಯ ಹಕ್ಕು ಪತ್ರಗಳನ್ನು ನೀಡಲಾಗಿದೆ. ಪೇಪರ್ ಹಕ್ಕು ಪತ್ರದ ಬದಲಿಗೆ ಡಿಜಿಟಲ್ ಹಕ್ಕು ಪತ್ರ ನೀಡುವುದರ ಜೊತೆಗೆ ಇ-ಸ್ವತ್ತು ಐಡಿ ನಮೂದಿಸಿ, ರಿಜಿಸ್ಟಾರ್ ಮಾಡಿಕೊಡಲಾಗುತ್ತಿದೆ. ಭವಿಷ್ಯದಲ್ಲಿ ಜನರಿಗೆ ಯಾವುದೇ ಸಮಸ್ಯೆ ಬರಬಾರದು ಹಾಗೂ ಸರ್ಕಾರಿ ಕಚೇರಿಗೆ ಅಲೆದಾಡಬಾರದು ಎಂಬ ಕಾರಣಕ್ಕಾಗಿ ಶಾಶ್ವತ ಪರಿಹಾರವನ್ನು ಕಂಡುಕೊಳ್ಳಾಲಾಗುತ್ತಿದೆ ಎಂದು ಹೇಳಿದ್ದಾರೆ.

**<><*<><>*><>**

ವಿಧಾನಸಭೆಯಲ್ಲಿಂದು ರಾಜ್ಯಪಾಲರ ಭಾಷಣದ ಮೇಲಿನ ಚರ್ಚೆ ಆರಂಭಿಸಿದ ಪ್ರತಿಪಕ್ಷ ನಾಯಕ ಆರ್.ಅಶೋಕ ಸರ್ಕಾರದ ವೈಫಲ್ಯವನ್ನು ತೆರೆದಿಟ್ಟಿದ್ದಾರೆ. ರಾಜ್ಯದ ಆರ್ಥಿಕ ಪರಿಸ್ಥಿತಿ

ಸಂಪೂರ್ಣವಾಗಿ ಹದಗೆಟ್ಟಿದೆ. ಈ ಸರ್ಕಾರದಲ್ಲಿ ವಾಲ್ಮೀಕಿ ಹಗರಣ, ಕಸದ ಟೆಂಡರ್ ಹಗರಣ, ರಸ್ತೆ ಗುಂಡಿ ಮುಚ್ಚುವ ಹಗರಣ, ಅಬಕಾರಿ ಹಗರಣ ಸೇರಿದಂತೆ ಹಲವಾರು ಭ್ರಷ್ಟಾಚಾರಗಳು ಬೆಳಕಿಗೆ ಬಂದಿವೆ. ರಾಜ್ಯದಲ್ಲಿ ಕಳೆದ ಎರಡೂವರೆ ವರ್ಷಗಳಲ್ಲಿ ನೇಮಕಾತಿಯೇ ನಡೆದಿಲ್ಲ ಎಂದು ಆರೋಪಿಸಿದ್ದಾರೆ. ಯಾವುದೇ ಮುಲಾಜಿಲ್ಲದೆ ರಾಜ್ಯದಲ್ಲಿರುವ ಬಾಂಗ್ಲಾ ವಲಸಿಗರನ್ನು ಹೊರ ಹಾಕಬೇಕು ಎಂದು ಆಗ್ರಹಿಸಿದ್ದಾರೆ. ರಾಜ್ಯದಲ್ಲಿ ಅಪರಾಧ ಕೃತ್ಯಗಳು ಹೆಚ್ಚುತ್ತಿವೆ ಎಂದು ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬಳಿಕ ಪ್ರತಿಪಕ್ಷ ಬಿಜೆಪಿ ಸಭಾತ್ಯಾಗ ನಡೆಸಿದ ಹಿನ್ನೆಲೆಯಲ್ಲಿ ಸದನವನ್ನು ಸಭಾಧ್ಯಕ್ಷ ಯು.ಟಿ.ಖಾದರ್ ಭೋಜನ ವಿರಾಮಕ್ಕೆ ಮುಂದೂಡಿದರು.

<><*<><>*><>

ವಿಧಾನಪರಿಷತ್‌ನಲ್ಲಿಂದು ಸದಸ್ಯ ಸಿ.ಎನ್.ಮಂಜೇಗೌಡ ಮಾತನಾಡಿ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಜೈಲುಗಳ ಪರಿಸ್ಥಿತಿ ಸರಿಯಿಲ್ಲ ಎಂದು ಸದನದ ಗಮನ ಸೆಳೆದರು. ನಿಯಮ - ೩೩೦ಎ ನಿಯಮದಡಿ ರಮೇಶ್ ಬಾಬು ವಿಷಯ ಪ್ರಸ್ತಾಪಿಸಿ, ಸರ್ಕಾರಿ ವಾಹನಗಳನ್ನು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಅಧಿಕಾರಿಗಳು ಸಾಮಾಜಿಕ ಹೋರಾಟಗಾರರು ಹಾಗೂ ಸಾರ್ವಜನಿಕರಿಗೆ ಕೇಳಿದ ಮಾಹಿತಿ ನೀಡಬೇಕು. ಈ ಕುರಿತು ವಿಶೇಷ ಪೊಲೀಸ್ ಸಿಬ್ಬಂದಿಗೆ ಗೃಹ ಇಲಾಖೆ ಸೂಚನೆ ನೀಡಬೇಕು ಎಂದು ತಿಳಿಸಿದರು. ಈ ವೇಳೆ, ಸಭಾನಾಯಕ ಎನ್.ಬೋಸರಾಜು ಮಾತನಾಡಿ, ಗೃಹ ಸಚಿವರಿಂದ ಈ ಕುರಿತಂತೆ ಉತ್ತರ ಕೊಡಿಸಲಾಗುವುದು ಎಂದು ಭರವಸೆ ನೀಡಿದರು.

ಸದಸ್ಯ ಪಿ.ಎಚ್.ಪೂಜಾರ್ ಮಾತನಾಡಿ, ಶಕ್ತಿ ಯೋಜನೆ ಕುರಿತು ಸರ್ಕಾರ ಸುಳ್ಳು ಹೇಳುತ್ತಿದೆ. ಈ ಯೋಜನೆಯಿಂದ ನಿಗಮಗಳಿಗೆ ಅನುದಾನ ಸಿಗುತ್ತಿಲ್ಲ. ಗೃಹಲಕ್ಷ್ಮೀ ಹಣ ಎರಡರಿಂದ ಮೂರು ತಿಂಗಳ ಬಳಿಕ ಖಾತೆಗೆ ಬರುತ್ತಿದೆ ಎಂದು ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಈ ವೇಳೆ, ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಆಕ್ಷೇಪ ವ್ಯಕ್ತಪಡಿಸಿ, ಒಂದು ಕೋಟಿ ೨೪ ಲಕ್ಷ ಜನರಿಗೆ ಯೋಜನೆ ತಲುಪಿದೆ ಎಂದು ಸರ್ಕಾರವನ್ನು ಸಮರ್ಥಿಸಿಕೊಂಡರು.

<><*<><>*><>

ಬೆಂಗಳೂರು ಮೆಟ್ರೋ ರೈಲಿನಲ್ಲಿ ಪ್ರಯಾಣಿಕರ ಜವಾಬ್ದಾರಿಯುತ ವರ್ತನೆ ಹಾಗೂ ಪ್ರಯಾಣ ಸಂದರ್ಭದಲ್ಲಿ ಪಾಲಿಸಬೇಕಾದ ನಿಯಮಗಳನ್ನು ಬಲಪಡಿಸುವ ಉದ್ದೇಶದಿಂದ ಬಿಎಂಆರ್‌ಸಿಎಲ್ ವಿಶೇಷ ಜಾಗೃತಿ ಅಭಿಯಾನ ಹಮ್ಮಿಕೊಂಡಿದೆ. ಮೆಟ್ರೋ ರೈಲುಗಳಲ್ಲಿ ಹೆಡ್‌ಫೋನ್ ಇಲ್ಲದೆ ಸಂಗೀತ ಕೇಳುವುದು, ಆಹಾರ ಸೇವಿಸಿವುದು, ತಂಬಾಕು ಸೇವನೆ ಮಾಡುವುದು ಸಹ

ಪ್ರಯಾಣಿಕರಿಗೆ ತೊಂದರೆ ಉಂಟು ಮಾಡುತ್ತಿದೆ. ಹಿರಿಯ ನಾಗರಿಕರಿಗೆ, ಗರ್ಭಿಣಿಯರಿಗೆ, ವಿಶೇಷಚೇತನರಿಗೆ ಮೀಸಲು ಆಸನಗಳನ್ನು ಬಿಟ್ಟುಕೊಡದಿರುವುದು ಗಮನಕ್ಕೆ ಬಂದಿದೆ. ಈ ಹಿನ್ನೆಲೆಯಲ್ಲಿ ಮೆಟ್ರೋ ರೈಲಿನಲ್ಲಿ ವಿಶೇಷ ಅಭಿಯಾನ ಆರಂಭಿಸಲಾಗಿದೆ. ಇದಕ್ಕಾಗಿ ವಿಶೇಷ ಸಿಬ್ಬಂದಿ ನಿಯೋಜಿಸಲಾಗಿದೆ. ಪ್ರಯಾಣಿಕರು ನಿಯಮ ಉಲ್ಲಂಘಿಸಿದರೆ, ೨೫೦ ರೂಪಾಯಿಂದ ೫೦೦ ರೂಪಾಯಿವರೆಗೆ ದಂಡ ವಿಧಿಸಲಾಗುತ್ತಿದೆ.

**<><*<><>*><>**

ಬಜೆಟ್‌ನಲ್ಲಿ ಜೀವರಕ್ಷಕ ೧೭ ಔಷಧಿಗಳಿಗೆ ಝೀರೋ ಟ್ಯಾಕ್ಸ್ ಮಾಡಿರುವುದು ಶ್ಲಾಘನೀಯ ಎಂದು ಸಂಸದ ಗೋವಿಂದ ಕಾರಜೋಳ ತಿಳಿಸಿದ್ದಾರೆ. ಬಾಗಲಕೋಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಡವರಿಗೆ ಕ್ಯಾನ್ಸರ್‌ನಂತಹ ಮಾರಕ ಕಾಯಿಲೆ ಬಂದರೆ ಔಷಧಿ ಖರೀದಿಗೆ ತೊಂದರೆಯಾಗುತ್ತಿತ್ತು. ಕೇಂದ್ರ ಸರ್ಕಾರ ಝೀರೋ ಟ್ಯಾಕ್ಸ್ ಮಾಡಿರುವುದರಿಂದ ಹೆಚ್ಚು ಅನುಕೂಲವಾಗಲಿದೆ ಹೇಳಿದ್ದಾರೆ.

**ಧ್ವನಿ: ಗೋವಿಂದ ಕಾರಜೋಳ, ಸಂಸದ ( ೧೮ ಸೆಕೆಂಡ್ಸ್)**

**<><*<><>*><>**

ಬೀದರ್‌ನ ಪಶು ವೈದ್ಯಕೀಯ ವಿಶ್ವವಿದ್ಯಾಲಯ ಬೆಂಗಳೂರಿನ ಹೆಬ್ಬಾಳದ ಪಶು ವೈದ್ಯಕೀಯ ಮಹಾವಿದ್ಯಾಲಯದ ಜೊತೆ ಸೇರಿ ರೇಬಿಸ್ ರೋಗದ ನಿಯಂತ್ರಣಕ್ಕಾಗಿ "ಓರಲ್ ವ್ಯಾಕ್ಸಿನ್" ಅಭಿವೃದ್ಧಿ ಪಡಿಸಲು ಸಂಶೋಧನೆ ನಡೆಸುತ್ತಿದೆ. ಈ ಲಸಿಕೆಯನ್ನು ಬೀದಿ ನಾಯಿಗಳಿಗೆ ಮಾಂಸ, ಮೊಟ್ಟೆಯ ಮೂಲಕ ನೀಡುವುದರಿಂದ ಅವುಗಳಲ್ಲಿ ರೋಗ ನಿರೋಧಕ ಶಕ್ತಿ ಹೆಚ್ಚಾಗಿ, ರೇಬಿಸ್ ನಿಯಂತ್ರಣಕ್ಕೆ ಬರುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ. ಬೀದರ್‌ನ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ.ಕೆ.ಸಿ.ವೀರಣ್ಣ ಆಕಾಶವಾಣಿಯೊಂದಿಗೆ ಮಾಹಿತಿ ಹಂಚಿಕೊಂಡಿದ್ದಾರೆ.

**ಧ್ವನಿ: ಡಾ.ಕೆ.ಸಿ.ವೀರಣ್ಣ ( ೨೧ ಸೆಕೆಂಡ್ಸ್)**

ಹೈದ್ರಾಬಾದ್‌ನ ರಾಷ್ಟ್ರೀಯ ಪ್ರಾಣಿ ಜೈವಿಕ ತಂತ್ರಜ್ಞಾನ ಸಂಸ್ಥೆ, ರಾಷ್ಟ್ರೀಯ ಪಶು ವೈದ್ಯಕೀಯ ಸಾಂಕ್ರಾಮಿಕ ರೋಗಶಾಸ್ತ್ರ ಮತ್ತು ಮಾಹಿತಿ ಸಂಸ್ಥೆ, ರಾಷ್ಟ್ರೀಯ ಪ್ರಾಣಿ ಸಂಪನ್ಮೂಲ ಸೌಲಭ್ಯ- ಐಸಿಎಂಆರ್ ಹಾಗೂ ರಾಷ್ಟ್ರೀಯ ಮಾಂಸ ಸಂಶೋಧನಾ ಸಂಸ್ಥೆಗಳು ಇದಕ್ಕೆ ನೆರವಾಗಿವೆ. ಈ ಲಸಿಕೆ ಅಭಿವೃದ್ಧಿಗಾಗಿ ಕೇಂದ್ರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು ರಾಷ್ಟ್ರೀಯ ಒನ್ ಹೆಲ್ತ್ ಮಿಷನ್ ಅಡಿಯಲ್ಲಿ ೨ ಕೋಟಿ ೮೯ ಲಕ್ಷ ರೂಪಾಯಿ ಅನುದಾನ ನೀಡಿದೆ.

**<><*<><>*><>**

ಗಣರಾಜ್ಯೋತ್ಸವ ದಿನದಂದು ಉಡುಪಿಯ ಸಾಸ್ತಾನ ಟೋಲ್‌ನಲ್ಲಿ ನಿವೃತ್ತ ಯೋಧರೊಬ್ಬರಿಗೆ ಟೋಲ್ ವಿನಾಯಿತಿ ನಿರಾಕರಿಸಿ ಅವಮಾನಿಸಿಲ್ಲ ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಸ್ಪಷ್ಟನೆ ನೀಡಿದೆ. ರಾಷ್ಟ್ರೀಯ ಹೆದ್ದಾರಿಗಳಲ್ಲಿ ಕಾರ್ಯ ನಿಮಿತ್ತ ಸಂಚರಿಸುವ ಯೋಧರಿಗೆ ಮಾತ್ರ ವಿನಾಯಿತಿ ನೀಡಲಾಗುವುದು. ಅಂದು ಟೋಲ್‌ನಲ್ಲಿ ಸಂಚರಿಸಿದ ಯೋಧ ವಿನಾಯಿತಿಗೆ ಅರ್ಹರಾಗಿರಲಿಲ್ಲ ಎಂದು ತಿಳಿಸಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**